**ಕರ್ನಾಟಕ ಸರ್ಕಾರ**

**ನೋಂದಣಿ ಮತ್ತು ಮುದ್ರಾಂಕ ಇಲಾಖೆ**

**ಸಂಖ್ಯೆ:** ಕಾನೂನು/ಇತರೆ/03/2018-19

ನೋಂದಣಿ ಮಹಾಪರಿವೀಕ್ಷಕರು ಹಾಗೂ
ಮುದ್ರಾಂಕಗಳ ಆಯುಕ್ತರ ಕಛೇರಿ
ಕಂದಾಯ ಭವನ, 8ನೇ ಮಹಡಿ,
ಕೆ.ಜಿ.ರೋಡ್, ಬೆಂಗಳೂರು.
ದಿನಾಂಕ: 03-08-2021.

**ಸುತ್ತೋಲೆ**

ವಿಷಯ: ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳ ನೋಂದಣಿ ಮಾಡುವಾಗ ಅನುಸರಿಸಬೇಕಾದ ಕ್ರಮ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಕಂ.ಇ 06 ಮುನೋಮು 2013, ದಿನಾಂಕ: 18-07-2014.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:23-06-2021 ರಂದು ನಡೆದ ಸಭೆಯ ನಡವಳಿಗಳು.

*****

ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಉಲ್ಲೇಖ(1)ರ ಸುತ್ತೋಲೆಯಲ್ಲಿ "ಕಾವೇರಿ ತಂತ್ರಾಂಶ ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳಿಗಾಗಿ ಇರುವ ಇ-ಸ್ವತ್ತು ತಂತ್ರಾಂಶವನ್ನು ಸಂಯೋಜನೆಗೊಳಿಸಿರುವುದರಿಂದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳಿಗೆ ಇರುವ ಇ-ಸ್ವತ್ತು ತಂತ್ರಾಂಶದಿಂದ ಮಾಹಿತಿ ಪಡೆದು ನೋಂದಣಿ ಮಾಡಲು ಆದೇಶಿಸಿದೆ. ಒಂದು ವೇಳೆ ಇ-ಸ್ವತ್ತು ತಂತ್ರಾಂಶದಲ್ಲಿ ಮಾಹಿತಿ ಲಭ್ಯವಿಲ್ಲದಿದ್ದಲ್ಲಿ ಕಾವೇರಿ ತಂತ್ರಾಂಶದಿಂದ ಉತ್ಪತ್ತಿಯಾಗುವ ಹಿಂಬರಹವನ್ನು ದಸ್ತಾವೇಜನ್ನು ಹಾಜರುಪಡಿಸುವ ಪಕ್ಷಕಾರರಿಗೆ ನೀಡಲು ಸೂಚಿಸಿದೆ" ಎಂದು ಆದೇಶಿಸಲಾಗಿತ್ತು.

ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ಉಲ್ಲೇಖ(2)ರ ನಡವಳಿಗಳಲ್ಲಿ ಕರ್ನಾಟಕ ಮುದ್ರಾಂಕ ಕಾಯ್ದೆ 1957 ರ ಅನುಸೂಚಿಯಲ್ಲಿ ಹೇಳಿರುವ ಆರ್ಟಿಕಲ್‌ಗಳನ್ನು ಕಾವೇರಿ ಮತ್ತು ಇ-ಸ್ವತ್ತು ತಂತ್ರಾಂಶಗಳನ್ನು ತಾಂತ್ರಿಕವಾಗಿ ಸಂಯೋಜನೆಗೊಳಿಸುವ ಸಂಬಂಧ ಉಲ್ಲೇಖ(1)ರ ಸರ್ಕಾರದ ಸುತ್ತೋಲೆಗೆ ಪೂರಕವಾಗಿ ಮತ್ತೊಮ್ಮೆ ಸುತ್ತೋಲೆಯನ್ನು ಹೊರಡಿಸಲು ಕಂದಾಯ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿರುತ್ತಾರೆ. ಕರ್ನಾಟಕ ಮುದ್ರಾಂಕ ಕಾಯ್ದೆ 1957 ರ ಅನುಸೂಚಿಯಲ್ಲಿ ಹೇಳಿರುವ ಆರ್ಟಿಕಲ್‌ಗಳಲ್ಲಿ ಅವಶ್ಯಕತೆ ಇರುವ ಆರ್ಟಿಕಲ್‌ಗಳನ್ನು ಕಾವೇರಿ ಮತ್ತು ಇ-ಸ್ವತ್ತು ತಂತ್ರಾಂಶಗಳಡಿ ಸಂಯೋಜನೆಗೊಳಿಸಲು ಕ್ರಮಕೈಗೊಳ್ಳಲಾಗಿದೆ. ಆದ್ದರಿಂದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ಥಿರ ಸ್ವತ್ತುಗಳಿಗೆ ಸಂಬಂಧಿಸಿದ ದಸ್ತಾವೇಜುಗಳನ್ನು ಉಲ್ಲೇಖ (1) ಮತ್ತು (2) ರಲ್ಲಿನ ನಿರ್ದೇಶನಗಳಂತೆ ಇ-ಸ್ವತ್ತು ತಂತ್ರಾಂಶದಿಂದ ಮಾಹಿತಿ ಪಡೆದು ನೋಂದಣಿ ಪೂರೈಸಲು ಸೂಚಿಸಿದೆ.

ಇದನ್ನು ಹೊರತುಪಡಿಸಿ ಬೇರೆ ಯಾವುದೇ ವಿಧಾನದಲ್ಲಿ ನೋಂದಣಿ ಮಾಡಿದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು.

3/8/21

**ನೋಂದಣಿ ಮಹಾಪರಿವೀಕ್ಷಕರು ಮತ್ತು**
**ಮುದ್ರಾಂಕಗಳ ಆಯುಕ್ತರು,**
**ಬೆಂಗಳೂರು.**

Scanned with CamScanner